ಪಿಡಬ್ಲ್ಯೂಃ 1

ಸಾಕ್ಷಿಯು ತಮ್ಮ ಮುಖ್ಯ ವಿಚಾರಣಾ ಪ್ರಮಾಣ ಪತ್ರ ಸಲ್ಲಿಸಿ ವಿಚಾರಣೆಗೆ ಒಳಪಟ್ಟಿದ್ದು, ಅವರನ್ನು ಪಿಡಬ್ಲ್ಯೂ-1 ಎಂದು ಪರಿಗಣಿಸಿ, ಇಂದು ದಿನಾಂಕಃ22.10.2019 ರಂದು ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿಯ ಪರ ಶ್ರೀ ಆರ್.ಸಿ. ಜಿ ವಕೀಲರಿಂದಃ

ನಾನು ನನ್ನ ಮೌಖಿಕ ವಿಚಾರಣೆಯ ಬದಲಾಗಿ ನನ್ನ ಮುಖ್ಯ ವಿಚಾರಣಾ ಸಾಕ್ಷಿ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ನಿಜವಿರುತ್ತವೆ. ಅದನ್ನು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿಗಳು ನನ್ನದೇ ಇರುತ್ತವೆ. ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಶಾನೀಕರಿಸಬೇಕೆಂದು ವಿನಂತಿಸಿಕೊಳ್ಳುತ್ತೇನೆ.

| ಕ್ರ.ಸಂಖ್ಯೆ | ಹಾಜರುಪಡಿಸಿದ ದಾಖಲಾತಿಗಳು | ನಿಶಾನಿಸಲ್ಪಟ್ಟ ಸಂಖ್ಯೆಗಳು |
|---|---|---|
| 1. | ದಿನಾಂಕಃ09.06.1976 ರ ಖರೀದಿ ಪತ್ರದ ದೃಢೀಕೃತ ಪ್ರತಿ | ನಿಪಿ-1 |
| 2. | 6 ಪಹಣಿ ಪತ್ರಿಕೆಗಳು | ನಿಪಿ-2 ರಿಂದ 7 |
| 3. | ಅಸಲು ದಾವಾ ಸಂಖ್ಯೆ156/2009 ರ ವಾದ ಪತ್ರ ಮತ್ತು ಪ್ರತಿವಾದ 1 ರವರ ಪ್ರತಿವಾದ ಪತ್ರ | ನಿಪಿ-8 ಮತ್ತು 9 |
| 4. | 10 ಪೋಟೋಗಳು ಮತ್ತು ಒಂದು ಸಿ.ಡಿ | ನಿಪಿ-10 ರಿಂದ 20 |

ಈ ಮೇಲ್ಕಂಡಂತೆ ದಾಖಲಾತಿಗಳನ್ನು ಗುರುತಿಸಲಾಯಿತು. ಆದ್ದರಿಂದ ನನ್ನ ಪರವಾಗಿ ದಾವೆಯನ್ನು ಡಿಕ್ರಿ ಮಾಡಲು ಕೋರುತ್ತೇನೆ.

**ಪಾಟೀ ಸವಾಲುಃ** ಪ್ರತಿವಾದಿ ಮತ್ತು ಅವರ ಪರ ವಕೀಲರು ಹಾಜರಿರುವುದಿಲ್ಲ, ಆದ್ದರಿಂದ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಸಹಿ/-

ಓ ಹೇ ಕೇ ಸರಿ ಇದೆ.

ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,

ಹಿರೇಕೆರೂರು.